ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:-ಎಡಿಎಂ2(1)ರಾ.ಐ.ಸ.-02/2017-18 ದಿನಾಂಕ:-12-04-2018

**ಸುತ್ತೋಲೆ**

ವಿಷಯ:-1908 ಎಂಬ ನಾಲ್ಕು ಅಂಕಿಗಳ ಶುಲ್ಕ ರಹಿತ ದೂರವಾಣಿಯನ್ನು ಪರಿಚಯಿಸುವ ಬಗ್ಗೆ.
ಉಲ್ಲೇಖ:-ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ: ಅ.ಸ.ಪತ್ರ ಸಂಖ್ಯೆ: ಒಇ 45 ಪಿಎನ್‌ಡಿ 2016 ದಿನಾಂಕ:-16-02-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಾದಕ ವಸ್ತುಗಳ ಮಾರಾಟ ಹಾಗೂ ಬಳಕೆಯ ವಿರುದ್ಧ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಪ್ರಸ್ತುತ ಬೆಂಗಳೂರು ನಗರ ಪೋಲಿಸರು 1908 ಎಂಬ ನಾಲ್ಕು ಅಂಕಿಗಳ ಶುಲ್ಕ ರಹಿತ ದೂರವಾಣಿಯನ್ನು ಪರಿಚಯಿಸಿದ್ದು, ಸಾರ್ವಜನಿಕರು ಗೌಪ್ಯವಾಗಿ ಮಾದಕ ವಸ್ತುಗಳ ಮಾರಾಟ ಹಾಗೂ ಬಳಕೆಯ ಬಗ್ಗೆ ಮಾಹಿತಿಯನ್ನು ಒದಗಿಸಬಹುದಾಗಿದೆ. ಈ ಸಂಖ್ಯೆಗೆ ಸಾಕಷ್ಟು ಸಂಖ್ಯೆಯಲ್ಲಿ ದೂರುಗಳು ಬರುತ್ತಿರುವುದು ಗಮನಿಸಲಾಗಿದೆ.

ಈ ಸಂಖ್ಯೆಗೆ ಹೆಚ್ಚಿನ ಪ್ರಚಾರ ನೀಡಲು ಬೆಂಗಳೂರು ನಗರ ಪೋಲೀಸ್ ಆಯುಕ್ತರು ಹಲವು ಬಗೆಯ ಜಾಹೀರಾತು, ಬ್ಯಾನರ್ ಮತ್ತು ಸ್ಟಿಕರ್‌ಗಳನ್ನು ಸಿದ್ದಪಡಿಸಿರುತ್ತಾರೆ. ಈಗಾಗಲೇ ಅವುಗಳನ್ನು ತಮ್ಮ ಇಲಾಖೆಗಳಿಗೂ ನೀಡಿ ಅರಿವು ಮೂಡಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಕೋರಲಾಗಿರುವುದಾಗಿ ಸರ್ಕಾರಕ್ಕೆ ವರದಿ ಮಾಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯಿಂದ ಸದರಿ ನಾಲ್ಕು ಅಂಕಿಗಳ ದೂರವಾಣಿಗೆ ಹೆಚ್ಚಿನ ಪ್ರಚಾರ ನೀಡುವಂತೆ ಕೋರಿರುತ್ತಾರೆ.

ಪರಿಶೀಲಿಸಲಾಗಿ, ಮಾದಕ ವಸ್ತುಗಳ ಮಾರಾಟ ಹಾಗೂ ಬಳಕೆಯ ವಿರುದ್ಧ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ 1908 ಎಂಬ ನಾಲ್ಕು ಅಂಕಿಗಳ ಶುಲ್ಕ ರಹಿತ ದೂರವಾಣಿ ಸಂಖ್ಯೆಯನ್ನು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನರಹಿತ ಶಾಲೆಗಳಲ್ಲಿ ಪರಿಚಯ ಮಾಡುವ ಸಂಬಂದ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾ.ಶಿ.ಇ ಇವರುಗಳಿಗೆ ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದೆ.

(ಬಿ.ಕೆ.ಬಸವರಾಜ)
ನಿರ್ದೇಶಕರು[ಪ್ರಾಥಮಿಕ ಶಿಕ್ಷಣ]

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾ.ಶಿ.ಇ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾ.ಶಿ.ಇ ಇವರುಗಳಿಗೆ ಉಪನಿರ್ದೇಶಕರ ಮುಖಾಂತರ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳನ್ನು,

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಶ್ರೀ ಸುಭಾಷ್ ಚಂದ್ರ, ಭಾ.ಆ.ಸೇ., ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು-01, ರವರಿಗೆ ಮಾಹಿತಿಗಾಗಿ.
3. ಕಛೇರಿ ಪ್ರತಿ.